## ವಿಶೇಷ ಡಿ.ಇಡಿ ಅಥವಾ ಬಿ.ಇಡಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನ

ವಿಜಯಪುರ: ಸಮನ್ವಯ ಶಿಕ್ಷಣ ಚಟುವಟಿಕೆಗಳ ಯಶಸ್ವಿ ಅನುಷ್ಠಾನಕ್ಕಾಗಿ ವಿಶೇಷ ಡಿ.ಇಡಿ ಅಥವಾ ಬಿ.ಇಡಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ ಎಂದು ಜಿಲ್ಲಾ ಸಮನ್ವಯ ಅಧಿಕಾರಿಗಳ, ಉಪನಿರ್ದೇಶಕರು ತಿಳಿಸಿದ್ದಾರೆ. 2020–21 ನೇ ಸಾಲಿನ ಸಮನ್ವಯ ಶಿಕ್ಷಣ ಚಟುವಟಿಕೆ ಯಶಸ್ವಿ ಅನುಷ್ಠಾನಕ್ಕಾಗಿ ನೇರ ಗುತ್ತಿಗೆ ಆಧಾರದ ಮೇಲೆ ಬಿ.ಐ.ಇ.ಆರ್.ಟಿ ಖಾಲಿ ಇರುವ ಹುದ್ದೆಗಳಿಗೆ ಭರ್ತಿ ಮಾಡಲು ಡಿ.ಇಡಿ/ಬಿ.ಇಡಿ ವಿದ್ಯಾಹರ್ತೆ ಹೊಂದಿದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ದಿನಾಂಕ 13–07–2020 ರಂದು ಮಧ್ಯಾಹ್ನ 1–30 ಗಂಟೆಯೊಳಗಾಗಿ ಉಪನಿರ್ದೇಶಕರು ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ–ಕರ್ನಾಟಕ ವಿಜಯಪುರ ಜಿಲ್ಲಾ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಲು ತಿಳಿಸಲಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಮೋ.ಸಂ: 9448999389 ಗೆ ಸಂಪರ್ಕಿಸಬುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಲಮಟ್ಟಿ ಒಳಹರಿವು ಪ್ರದೇಶದ ಜನರು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರವಾಗುವಂತೆ ಮುನ್ಸೂಚನೆ

ವಿಜಯಪುರ: ಕೃಷ್ಣಾ ನದಿ ಪಾತ್ರದಲ್ಲಿ ವ್ಯಾಪಕವಾಗಿ ಮುಂಗಾರು ಮಳೆಯು ಪ್ರಾರಂಭವಾಗಿದ್ದು, ಆಲಮ್ಮಟಿ ಜಲಾಶಯಕ್ಕೆ ಒಳ ಹರಿವಿನ ಪ್ರಮಾಣ ಹೆಚ್ಚಾಗಿರುವುದರಿಂದ, ಆಲಮಟ್ಟಿ ಜಲಾಶಯದಿಂದ ಯಾವುದೇ ಕ್ಷಣದಲ್ಲಿ ನೀರನ್ನು ಹೊರಬಿಡುವ ಸಾಧ್ಯತೆ ಇರುವುದರಿಂದ ಆಣೆಕಟ್ಟಿನ ಕೆಳಭಾಗದ ಪ್ರದೇಶಗಳಲ್ಲಿ ಮುಳುಗಡೆಯಾಗಲಿರುವ ಎಲ್ಲ ಹಳ್ಳಿಗಳ ಹಾಗೂ ನಗರಗಳ ಸಾರ್ವಜನಿಕರು ತಮ್ಮ ಜನ–ಜಾನುವಾರುಗಳನ್ನು ಹಾಗೂ ಆಸ್ತಿ–ಪಾಸ್ತಿಗಳನ್ನು ವಗೈರೆಗಳನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರ ಮಾಡಿಕೊಳ್ಳಬೇಕು ಹಾಗೂ ಕೆಳಭಾಗದಲ್ಲಿ ಬರುವ ನದಿಯ ಪಕ್ಕದ ಹಳ್ಳಿಯ ಜನರು ಎಚ್ಚರಿಕೆಯಿಂದ ಇರಬೇಕು ಎಂದು ಕೃಭಾಜನಿ, ಆಣೆಕಟ್ಟು ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಮುನ್ಸೂಚನೆ ನೀಡಿದ್ದಾರೆ.

## ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ವಿಜಯಪುರ : ಸಫಾಯಿ ಕರ್ಮಚಾರಿಗಳು ಮ್ಯಾನುವಲ್ ಸ್ಕ್ಯಾವೆಂಜರ್‌ಗಳಿಗೆ ಹಾಗೂ ಅವರ ಕುಟುಂಬ ಅವಲಂಬಿತ ಸದಸ್ಯರಿಗೆ 2019–20ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಾಲ ಮತ್ತು ಧನ ಸಹಾಯ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಡಾ. ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಸ್ವಯಂ ಉದ್ಯೋಗ ಯೋಜನೆ, ಉನ್ನತಿ ಯೋಜನೆ, ಐರಾವತ ಯೋಜನೆ, ಪ್ರೇರಣಾ ಯೋಜನೆ, ಸ್ಫೂರ್ತಿ ಯೋಜನೆ, ಪ್ರಭುದ್ಧ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಭೂ ಒಡೆತನ ಯೋಜನೆಯಡಿ 2019–20ನೇ ಸಾಲಿನ ಅರ್ಹ ಫಲಾಪೇಕ್ಷಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ವೆಬ್‌ಸೈಟ್ www.ksskds.kar.nic.in ಮೂಲಕ ದಿನಾಮಕ 31–07–2020 ರೋಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬುದಾಗಿದ್ದು, ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿ ಮಂಡಿಸಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಲಾವುದು. ಆಯ್ಕೆಯಾದ ಫಲಾನುಭವಿಗಳ ವಿವರಗಳನ್ನು ಆನ್‌ಲೈನ್‌ನಲ್ಲಿಯೇ ಅನುಮೋದನೆ ನೀಡಲಾಗುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕಾ ಮಟ್ಟ ಹಾಗೂ ಜಿಲ್ಲಾ ಮಟ್ಟದಲ್ಲಿ ಶ್ರೇಷ್ಠ ಕೃಷಿಕ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ವಿಜಯಪುರ: ಆತ್ಮ (ಎ.ಟಿ.ಎಂ.ಎ) ಯೋಜನೆ ಅಡಿಯಲ್ಲಿ 2020–21 ನೇ ಸಾಲಿನ ತಾಲೂಕಾ ಮಟ್ಟದ ಹಾಗೂ ಜಿಲ್ಲಾ ಮಟ್ಟದಲ್ಲಿ ಶ್ರೇಷ್ಠ ಕೃಷಿಕ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಆತ್ಮ ಯೋಜನೆ ನಿರ್ದೇಶಕರು ಹಾಗೂ ಉಪ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ತಾಲೂಕಾ ಮಟ್ಟದಲ್ಲಿ ಪ್ರತಿ ತಾಲೂಕಿನಲ್ಲಿ 05 ಜನ ರೈತರಿಗೆ ಸಾವಯುವ/ಸಮಗ್ರ ಕೃಷಿ, ತೋಟಗಾರಿಗೆ, ರೇಷ್ಮೆ ಬೇಸಾಯ, ಪಶು ಸಂಗೋಪನೆ/ಮೀನುಗಾರಿಕೆ, ಸಿರಿಧಾನ್ಯ ಬೇಸಾಯಗಳಲ್ಲಿ ತಲಾ ಒಂದೊಂದು ಪ್ರಶಸ್ತಿ ನೀಡಲಾಗುತ್ತದೆ.

ಅದರಂತೆ ಜಿಲ್ಲಾ ಮಟ್ಟದಲ್ಲಿ ಒಟ್ಟು 10 ಜನ ರೈತರಿಗೆ ಸಾವಯುವ/ಸಮಗ್ರ ಕೃಷಿ–2, ತೋಟಗಾರಿಗೆ–2, ರೇಷ್ಮೆ ಬೇಸಾಯ–2, ಪಶು ಸಂಗೋಪನೆ/ಮೀನುಗಾರಿಕೆ–2, ಸಿರಿಧಾನ್ಯ ಬೇಸಾಯ/ಸಿರಿಧಾನ್ಯ ಸಂಸ್ಕರಣೆ–2 ರಂತೆ ನೀಡಲಾಗುತ್ತಿದ್ದು, ಆಸಕ್ತ ರೈತರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತ ರೈತರು ಅರ್ಜಿ ನಮೂನೆಯನ್ನು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಿಂದ ಅಥವಾ ರೈತ ಸಂಪರ್ಕ ಕೇಂದ್ರದಿಂದ ಪಡೆಯುಬಹುದಾಗಿದ್ದು, ಭರ್ತಿ ಮಾಡಿದ ಅರ್ಜಿಯುನ್ನು ಸಂಬಂಧಪಟ್ಟ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ದಿನಾಂಕ 31–07–2020 ಸಂಜೆ 5–00 ಗಂಟೆ ರೊಳಗಾಗಿ ಸಲ್ಲಿಸಬೇಕು.

ಈಗಾಗಲೇ ಸರ್ಕಾರದಿಂದಾಗಲಿ ಅಥವಾ ಸರ್ಕಾರಿ ಸೌಮ್ಯದ ಸಂಸ್ಥೆಗಳಿಂದ ಮೇಲ್ಕಾಣಿಸಿದ ವಿಷೆಯಗಳಲ್ಲಿ ಹಾಗೂ ಮಟ್ಟಗಳಲ್ಲಿ ಸಮನಾದ ಪ್ರಶಸ್ತಿಗಳನ್ನು ಪಡೆದ ರೈತರು ಹಾಗೂ ಅವರ ಕುಟುಂಬದ ಸದಸ್ಯರು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಆದರೇ ತಾಲೂಕು ಮಟ್ಟದಲ್ಲಿ ಪ್ರಶಸ್ತಿ ಪಡೆದ ರೈತರು ಜಿಲ್ಲಾ ಮಟ್ಟ್ದ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದಾಗಿದ್ದು, ಓರ್ವ ರೈತ ಒಂದೇ ಅರ್ಜಿಯನ್ನು ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

ಶಿವಮೊಗ್ಗ, ಜುಲೈ 08 ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಗಮವು ಪ್ರಸಕ್ತ ಸಾಲಿನ ಸ್ವಯಂ ಉದ್ಯೋಗ, ಸಮೃದ್ಧಿ, ಉನ್ನತಿ, ಐರಾವತ, ಪ್ರೇರಣಾ, ಸ್ಫೂರ್ತಿ, ಪ್ರಬುದ್ಧ, ಗಂಗಾಕಲ್ಯಾಣ ಹಾಗೂ ಭೂ ಒಡೆತನ ಸೇರಿದಂತೆ ವಿವಿಧ ಯೋಜನೆಯಡಿ ಸೌಲಭ್ಯ ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ನಗಧಿಪಡಿಸಲಾಗಿದ್ದ ದಿನಾಂಕವನ್ನು ಜುಲೈ 31ರವರೆಗೆ ವಿಸ್ತರಿಸಲಾಗಿದೆ.

ಆಸಕ್ತ ಅರ್ಹ ಸಫಾಯಿ ಕರ್ಮಚಾರಿ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕೆಲಸ ನಿರ್ವಹಿಸುತ್ತಿರುವವರು ಮತ್ತು ಕುಟುಂಬದವರು ನಿಗಮುದ ವೆಬ್‌ಸೈಟ್: www.ksskdc.kar.nic.in ನಲ್ಲಿ ಅರ್ಜಿಯುನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 080–23221320 ಅಥವಾ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಗಾಂಧಿನಗರ, ಶಿವಮೊಗ್ಗ. ದೂರವಾಣಿ ಸಂಖ್ಯೆ 08182–224349ನ್ನು ಸಂಪರ್ಕಿಸಬಹುದಾಗಿದೆ.

# ಚಿಕ್ಕೋಡಿ: ತೈಲ ಬೆಲೆ ಏರಿಕೆಗೆ ವಿರೋಧ



ಚಿಕ್ಕೋಡಿ: ದೇಶದಲ್ಲಿ ಇಂಧನ ಬೆಲೆ ಏರಿಕೆ ಖಂಡಿಸಿ ಜೆಡಿಎಸ್ ಕಾರ್ಯಕರ್ತರು ಪಟ್ಟಣದಲ್ಲಿ ಮಂಗಳವಾರ ಪ್ರತಿಭಟಿಸಿ, ತಹಸೀಲ್ದಾರ್ ಮೂಲಕ ಪ್ರಧಾನ ಮಂತ್ರಿಗೆ ಮನವಿ ಸಲ್ಲಿಸಿದರು. ಪಟ್ಟಣದ ಪ್ರವಾಸಿ ಮಂದಿರದಿಂದ ಪಾದಯಾತ್ರೆ ಮೂಲಕ ತೆರಳಿ, ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಅಂತಾರಾಷ್ಟ್ರೀಯ ಮಟ್ಟದಲ್ಲಿ ಕಚ್ಚಾ ತೈಲ ಬೆಲೆ ಇಳಿಕೆಯಾದರೂ ಅದರ ಲಾಭವನ್ನು ಕೇಂದ್ರ ಸರ್ಕಾರ ಜನರಿಗೆ ನೀಡುತ್ತಿಲ್ಲ.

ಬೆಲೆ ಏರಿಕೆ ಬಿಸಿಯಿಂದ ಜನರು ತೀವ್ರ ಸಮಸ್ಯೆ ಅನುಭವಿಸುತ್ತಿದ್ದಾರೆ. ಕಳೆದ ವರ್ಷ ಸುರಿದ ಮಳೆ ಹಾಗೂ ಕೃಷ್ಣಾ ನದಿ ಪ್ರವಾಹದಲ್ಲಿ ಹಾನಿ ಅನುಭವಿಸಿದ ಸಂತ್ರಸ್ತರಿಗೆ ಸರ್ಕಾರ ಇನ್ನೂ ಪರಿಹಾರ ನೀಡಿಲ್ಲ. ಶೀಘ್ರ ಪರಿಹಾರ ವಿತರಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ತೀವ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಮಾಜಿ ಶಾಸಕ ಕಲ್ಲಪ್ಪಣ್ಣ ಮಗೆಣ್ಣವರ, ಜೆಡಿಎಸ್ ಜಿಲ್ಲಾಧ್ಯಕ್ಷ ಶಂಕರ ಮಾಡಲಗಿ, ಗಿರೀಶ ಬುಟಾಳೆ, ರಾಜೇಂದ್ರ ಐಹೊಳೆ, ನಿಪ್ಪಾಣಿ ಬ್ಲಾಕ್ ಅಧ್ಯಕ್ಷ ಅಣ್ಣಾ ಪಾಟೀಲ, ಬಿ.ಬಿ. ಮುಗಳಿಹಾಳ, ಪ್ರಭಾಕರ ಪಾಟೀಲ, ಭಾಗ್ಯಶ್ರೀ ಕದಂ, ಎಂ.ಕೆ. ಪಾಟೀಲ, ಕಾಡಗೌಡ ಪಾಟೀಲ, ಬಸುಗೌಡ ಪಾಟೀಲ, ಜಾಕೀರ ಜಾಹಂಗೀರದಾರ, ಮುದ್ದುಶೀರ ಆಲಾಲಖಾನ್ ಇತರರು ಪಾಲ್ಗೊಂಡಿದ್ದರು.

# ವಿಷೇಶ ಕಿರು ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಹಾಸನ,ಜು.09:– 2020–21ನೇ ಸಾಲಿನ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ್ ನಿಧಿಯ(ಕಒ ಖಗಿಂಓಜಝ) ಯೋಜನೆ ಯನ್ನು ಡೇ–ನಲ್ಮ್ ಅಭಿಯಾನ ಯೋಜನೆಯಡಿಯಲ್ಲಿ ಹಾಸನ ನಗರ ಪ್ರದೇಶದಲ್ಲಿ ಕೋವಿಡ್–19 ಅವಧಿಯಲ್ಲಿ ತೊಂದರೆಗೊಳಗಾದ ಬೀದಿ ಬದಿ ವ್ಯಾಪಾರಸ್ಥರ ವ್ಯವಹಾರವನ್ನು ಪ್ರಾರಂಭಿಸಲು ಬಂಡವಾಳವನ್ನು ಒದಗಿಸಲು ತುರ್ತು ಅವಶ್ಯಕತೆ ಇರುವ ಸಂದರ್ಭದಲ್ಲಿ ವಿಶೇಷ ಕಿರು ಸಾಲ ಸೌಲಭ್ಯ ಯೋಜನೆ (Special Micro Credit facility Scheme) ಯನ್ನು ಅನುಷ್ಠಾನಗೊಳಿಸುವ ಸಂಬಂಧ ಅರ್ಜಿಗಳನ್ನು ಆಹ್ವಾನಸಲಾಗಿದೆ. ಹಾಸನ ನಗರ ಸಭಾ ವ್ಯಾಪ್ತಿಯಲ್ಲಿ ವ್ಯಾಪಾರ ಮಾಡುತ್ತಿರುವ ವ್ಯಾಪರಸ್ಥರು ಅರ್ಜಿಗಳನ್ನು ಸಲ್ಲಿಸಲು ಜುಲೈ 23 ಸಂಜೆ 5.30 ರೊಳಗಾಗಿ ಕಚೇರಿಗೆ ದಾಖಲಾತಿಗಳೊಂದಿಗೆ ಸಲ್ಲಿಸ ತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಡೇನಲ್ಮ್ ಯೋಜನೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಲು ಕೋರಿದೆ. ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು: ಭರ್ತಿಮಾಡಿದ ಅರ್ಜಿ ನಮೂನೆ –2, ಭಾವಚಿತ್ರ ? 2, ಮಾರಾಟ ಪ್ರಮಾಣ ಪತ್ರ/ಗುರುತಿನ ಚೀಟಿ –2, ಆಧಾರ್ಕಾರ್ಡ್–2 ರೇಷನ್ ಕಾರ್ಡ್–2 ಜಾತಿ ಪ್ರಮಾಣ ಪತ್ರ –2, ಚಾಲ್ತಿಯುಲ್ಲಿರುವ ಬ್ಯಾಂಕ್ ಪಾಸ್‌ಪುಸ್ತಕ ನಕಲು ಪ್ರತಿ –2, 18 ವರ್ಷ ಮೇಲ್ಪಟ್ಟ ಮನೆಯ ಸದಸ್ಯರುಗಳ ಆಧಾರ್ ಕಾರ್ಡ್–2 .

# ಕಾನೂನು ತರಬೇತಿಗೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಹಾವೇರಿ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಹಿಂದುಳಿದ ವರ್ಗಗಳ 10 ಜನ ಕಾನೂನು ಪದವೀಧರರಿಗೆ ತರಬೇತಿ ನೀಡಲು ಅರ್ಹ ಹಿಂದುಳಿದ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಂದ ಅರ್ಜಿ ಆಹ್ವಾನಸಲಾಗಿದೆ.

ಅಭ್ಯರ್ಥಿಯು ಹಾವೇರಿ ಜಿಲ್ಲೆಯವರಾಗಿರಬೇಕು ಹಾಗೂ ಪ್ರವರ್ಗ–1ರ ಅಭ್ಯರ್ಥಿಗಳ ವಯಸ್ಸು ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕಕ್ಕೆ 40 ವರ್ಷ ಹಾಗೂ ಇತರೆ ಪ್ರವರ್ಗಗಳ ಅಭ್ಯರ್ಥಿಗಳ ವಯಸ್ಸು 38 ವರ್ಷ ಮೀರಿರಬಾರದು. ಪ್ರವರ್ಗ–1ರ ಅಭ್ಯರ್ಥಿಗಳಿಗೆ ವಾರ್ಷಿಕ ಆದಾಯ ರೂ.3.50 ಲಕ್ಷ ಮತ್ತು ಪ್ರವರ್ಗ–2(ಎ),3(ಎ),3(ಬಿ) ಅಭ್ಯರ್ಥಿಗಳಿಗೆ ವಾರ್ಷಿಕ ಆದಾಯ ರೂ. 2.50ಲಕ್ಷಗಳಿಗಿಂತ ಕಡಿಮೆ ಇರಬೇಕು.

ತರಬೇತಿಯ ಅವಧಿ ನಾಲ್ಕು ವರ್ಷಗಳಾಗಿದ್ದು, ತರಬೇತಿಗೆ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ತರಬೇತಿ

ಅವಧಿಯಲ್ಲಿ ಮಾಹೆಯಾನ ರೂ.4000 ತರಬೇತಿ ಭತ್ಯೆ ನೀಡಲಾಗುವುದು. ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಿಂದ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ತರಬೇತಿಗೆ ಅರ್ಜಿಯನ್ನು ಸಲ್ಲಿಸಲು ನಿಗಧಿ ಪಡಿಸಿರುವ ಕೊನೆಯ ದಿನಾಂಕಕ್ಕೆ ಹಿಂದೆ 2ವರ್ಷದೊಳಗಾಗಿ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್/ ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷಗಳ ವಕೀಲ ವೃತ್ತಿಯಲ್ಲಿ ಅನುಭವವುಳ್ಳ ಯಾವುದೇ ವಕೀಲರ ಅಧಿ?ನದಲ್ಲಿ ತರಬೇತಿಗೆ ನಿಯೋಜಿಸಲಾಗುವುದು. ತರಬೇತಿಯನ್ನು ಮಧ್ಯದಲ್ಲಿ ಬಿಡಬಾರದು. ತರಬೇತಿ ಮಧ್ಯದಲ್ಲಿ ಬಿಟ್ಟಲ್ಲ ಸರ್ಕಾರದಿಂದ ಪಡೆದ ತರಬೇತಿ ಭತ್ಯೆಯನ್ನು ನಿಯಮಾನುಸಾರ ಬಡ್ಡಿಯೊಂದಿಗೆ ಮರುಪಾವತಿಸಬೇಕಾಗುವದು. ತರಬೇತಿ ಅವಧಿಯಲ್ಲಿ ರಾಜ್ಯ ಕೇಂದ್ರ ಸರ್ಕಾರದ ಸೇವೆಗೆ ನೇಮಕವಾದಲ್ಲಿ ಈ ಷರತ್ತು ಅನ್ವಯಿಸುವುದಿಲ್ಲ. ಅಭ್ಯರ್ಥಿಯು ಸುಳ್ಳು ದಾಖಲೆ ಸಲ್ಲಿಸಿದಲ್ಲಿ ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಜರುಗಿಸಲಾಗುವುದು. ಅಲ್ಲದೇ ಅವರಿಗೆ ನೀಡಿರುವ ತರಬೇತಿ ಭತ್ಯೆಯನ್ನು ಶೇಕಡಾ 10 ರಷ್ಟು ಬಡ್ಡಿಯೊಂದಿಗೆ ಕಾನೂನಿನ ರೀತಿಯಲ್ಲಿ ವಸೂಲು ಮಾಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಕಾನೂನು ಪದವಿಯಲ್ಲಿ ಪಡೆದ ಅಂಕಪಟ್ಟಿಗಳು, ಪಾಸಿಂಗ್ ಸರ್ಟಿಫಿಕೇಟ್, ಜಾತಿ ಹಾಗೂ ಆದಾಯ ಪ್ರಮಾಣ ಪತ್ರ, ಜಿಲ್ಲಾ/ತಾಲೂಕು ವಕೀಲರ ಸಂಘ (ಬಾರ್ ಅಸೋಷಿಯೇಷನ್)ದಲ್ಲಿ ನೊಂದಾಯಿತ ಪ್ರಮಾಣ ಪತ್ರ,ಕರ್ನಾಟಕ ವಕೀಲರ ಪರಿಷತ್ತಿನಲ್ಲಿ (ಸ್ಟೇಟ್ ಬಾರ್ ಕೌನ್ಸಲ್) ನೊಂದಾಯಿತ ಪ್ರಮಾಣ ಪತ್ರದೊಂದಿಗೆ ಭರ್ತಿಮಾಡಿದ ಅರ್ಜಿಯನ್ನು ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಡಳಿತ ಭವನ, ಬಿ–ಬ್ಲಾಕ್, ರೂಂ.ನಂ.26 ಹಾವೇರಿ ಇವರಿಗೆ ದಿನಾಂಕ 10–08–2020ರೊಳಗಾಗಿ ಸಲ್ಲಿಸಬೇಕು.

ಅಪೂರ್ಣ ಹಾಗೂ ನಿಗಧಿ ಪಡಿಸಿದ ದಿನಾಂಕ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ದೂರವಾಣಿ ಸಂಖ್ಯೆ:08375–249008) ಕಚೇರಿ ಸಂಪರ್ಕಿಸಹುದೆಂದು ಇಲಾಖೆ ಪ್ರಕಟಣೆ ತಿಳಿಸಿದೆ.

# ಹಾನಗಲ್‌ನಲ್ಲಿ ಕೋವಿಡ್ ಚಿಕಿತ್ಸೆಗೆ 50 ಹಾಸಿಗೆ ತಾಲೂಕಾ ಆಸ್ಪತ್ರೆ ಒಂದು ವಾರದಲ್ಲಿ ಸಿದ್ಧ ಜಿ.ಪಂ.ಸಿ.ಇ.ಓ ರಮೇಶ ದೇಸಾಯಿ

ಹಾವೇರಿ: ಜಿಲ್ಲೆಯಲ್ಲಿ ಕೋವಿಡ್ ಸೋಂಕಿತರ ಸಂಖ್ಯೆ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ತಾಲೂಕಾ ಕೇಂದ್ರಗಳಲ್ಲಿರುವ ಆಸ್ಪತ್ರೆಗಳಲ್ಲಿ ಕೋವಿಡ್ ಚಿಕಿತ್ಸಾ ಆಸ್ಪತ್ರೆಗಳನ್ನು ಸಿದ್ಧಪಡಿಸಲಾಗುತ್ತಿದೆ. ಈ ಹಿನ್ನಲೆಯಲ್ಲಿ ಮಂಗಳವಾರ ಹಾನಗಲ್ ತಾಲೂಕಾ ಆಸ್ಪತ್ರೆಯಲ್ಲಿ ಕೋವಿಡ್ ಚಿಕಿತ್ಸೆಗಾಗಿ 50 ಹಾಸಿಗೆಗಳನ್ನು ಒಂದು ವಾರದಲ್ಲಿ ಸಿದ್ಧಪಡಿಸಲಾಗುವುದು ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ರಮೇಶ ದೇಸಾಯಿ ತಿಳಿಸಿದ್ದಾರೆ.

ಮಂಗಳವಾರ ಹಾನಗಲ್ ತಾಲೂಕಾ ಆಸ್ಪತ್ರೆಗೆ ಬೆಂಗಳೂರಿನ ಆರೋಗ್ಯ ಇಲಾಖೆಯ ಇಂಜನೀಯರ ಅವರೊಂದಿಗೆ ಭೇಟಿ ನೀಡಿ ಕೋವಿಡ್ ಸೋಂಕಿತರ ಚಿಕಿತ್ಸೆಗೆ ಆಸ್ಪತ್ರೆಯನ್ನು ಸಿದ್ಧಗೊಳಿಸುವುದಕ್ಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಈ ಆಸ್ಪತ್ರೆಯಲ್ಲಿ ಲಿಕ್ವಿಡ್ ಆಕ್ಸಿಜನ್ ವ್ಯವಸ್ಥೆಯನ್ನು ಮಾಡಲಾಗುತ್ತಿದೆ, ಇದಕ್ಕಾಗಿ ಆರೀಗ್ಯ ಇಲಾಖೆಯು ಇಂಜನೀಯುರುಗಳು ಮಂಗಳವಾರದಿಂದಲೇ ಕೆಲಸವನ್ನು ಪ್ರಾರಂಭಿಸಿದ್ದಾರೆ ಒಂದು ವಾರದಲ್ಲಿ ಕೆಲಸವನ್ನು ಪೂರ್ಣಗೊಳಿಸಿ ಕೋವಿಡ್ ಸೋಂಕಿತರಿಗೆ ಚಿಕಿತ್ಸೆ ನೀಡುವುದಕ್ಕೆ ಸಿದ್ಧಗೊಳಿಸಲಿದ್ದಾರೆ. ಪ್ರಸಕ್ತ ಸವಣೂರ ತಾಲೂಕಾ ಆಸ್ಪತ್ರೆಯ ಮಾದರಿಯಲ್ಲಿ ಹಾನಗಲ್ ತಾಲೂಕಾ ಆಸ್ಪತ್ರೆಯನ್ನು ಸಿದ್ಧಮಾಡಲಾಗುವುದು ಎಂದು ತಿಳಿಸಿದ್ದಾರೆ.

ಹಾನಗಲ್ ಆರೋಗ್ಯ ಕೇಂದ್ರದಲ್ಲಿ ಖಾಲಿ ಇರುವ ವೈದ್ಯರು, ಎಎನ್‌ಎಂ, ಸ್ಟಾಫ ನರ್ಸ್ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ಒಂದು ವಾರದಲ್ಲಿ ಕ್ರಮಗಳನ್ನು ಕೈಗೊಳ್ಳಬೇಕು, ಎಂಬಿಬಿಎಸ್ ವೈದ್ಯರು ಬಾರದಿದ್ದರೆ ಬಿಎಎಂಎಸ್ ವೈದ್ಯರನ್ನು ಭರ್ತಿ ಮಾಡಿಕೊಳುವಂತೆ ಡಿಹೆಚ್‌ಓ ಅವರಿಗೆ ಸೂಚಿಸಿದರು.

ಜಿಲ್ಲೆಯಾದ್ಯಂತ ಕೋವಿಡ್ ಸೋಂಕಿತರ ಸಂಖ್ಯೆ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಎಲ್ಲ ತಾಲೂಕಾ ಕೇಂದ್ರಗಳಲ್ಲಿನ ತಾಲೂಕಾ ಆಸ್ಪತ್ರೆಗಳನ್ನು ಕೋವಿಡ್ ಚಿಕಿತ್ಸೆಗೆ ಸಿದ್ಧಗೊಳಿಸುವುದಕ್ಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಹಾನಗಲ್ ತಾಲೂಕಾ ಆಸ್ಪತ್ರೆಯಲ್ಲಿ ಕೋವಿಡ್ ಚಿಕಿತ್ಸೆಗೆ ಮತ್ತು ಇತರೆ ಖಾಯಿಲೆಗಳಿಗೆ ಚಿಕಿತ್ಸೆ ನೀಡುವುದಕ್ಕೆ ಪ್ರತ್ಯೇಕ ವ್ಯವಸ್ಥೆಯನ್ನು ಈಗಾಗಲೇ ಮಾಡಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಾಜೇಂದ್ರ ದೊಡ್ಡಮನಿ, ತಾಲೂಕಾ ಆರೋಗ್ಯಾಧಿಕಾರಿ ಡಾ. ರವೀಂದ್ರಗೌಡ ಪಾಟೀಲ, ತಾ ಆರೋಗ್ಯ ಆಡಳಿತಾಧಿಕಾರಿ ಡಾ. ಪೂರ್ಣಿಮಾ ಮುಂದಿನಮನಿ, ತಾ.ಪಂ ಇಓ ಚನ್ನಪ್ಪ ರಾಯಣ್ಣನವರ ಹಾಗೂ ಇತರ ಅಧಿಕಾರಿಗಳಿದ್ದರು.

## ಪದವೀಧರರಿಂದ ಅರ್ಜಿ ಆಹ್ವಾನ

ಹಾವೇರಿ: : ಬೆಂಗಳೂರು ಸ್ಟಾಫ್ ಸೆಲೆಕ್ಸನ್ ಕಮಿಷನ್(STAFF SELECTION COMMISSION(KKR)) ಯಾವುದೇ ಪದವಿ ಹೊಂದಿದ ಯುವಕ ಹಾಗೂ ಯುವತಿಯರಿಂದ Sub Police Forces (CAPFS)2020 ನೇಮಕಾತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಸಲಾಗಿದೆ.

20 ರಿಂದ 25 ವರ್ಷದೊಳಗಿನ ಆಸಕ್ತ ಅಭ್ಯರ್ಥಿಗಳು ದಿನಾಂಕ 16–7–2020ರೊಳಗಾಗಿ https://ssc.nic.in ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–25502520, ಮೊ.94483 862020, 08375–249291 ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ಕಬ್ಬೂರ ಕುವೆಂಪು ಶತಮಾನೋತ್ಸವ ಶಾಲೆಯಲ್ಲಿ ಪರಿಸರ ದಿನ ಆಚರಣೆ

ಹಾವೇರಿ:: ಹಾವೇರಿ ತಾಲೂಕಿನ ಕಬ್ಬೂರ ಗ್ರಾಮದ ಕುವೆಂಪು ಶತಮಾನೋತ್ಸವ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬುಧವಾರ ವಿವಿಧ ಬಗೆಯ ಸಸಿಗಳನ್ನು ನೆಡುವುದರ ಮೂಲಕ ಪರಿಸರ ದಿನಾಚರಣೆ ಆಚರಿಸಲಾಯಿತು.

ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಚ್ ಪಾಟೀಲ ಅವರು ಮಾತನಾಡಿ, ಶಾಲೆಯ ಶಿಕ್ಷಕರು ಮಕ್ಕಳ ಬಗ್ಗೆ ಕಾಳಜಿ ಇಟ್ಟುಕೊಂಡು ಅಕ್ಷರ ದಾಸೋಹ ಯೋಜನೆಗೆ ಅನುಕೂಲವಾಗುವ ಬಗೆ ಬಗೆಯ ಸಸಿಗಳನ್ನು ಬೆಳೆಸಲು ಮುಂದಾಗಿರುವುದು ಶ್ಲಾಘನೀಯ ಎಂದರು.

ಶಾಲೆಯಲ್ಲಿ ಕಲಿಯುವ ಮಕ್ಕಳಿಗೆ ಮುಂದಿನ ದಿನಗಳಲ್ಲಿ ಅಕ್ಷರದಾಸೋಹಕ್ಕೆ ಅನುಕೂಲವಾಗಲೆಂದು ಶಾಲೆಯ ಶಿಕ್ಷರು ಸೇರಿ ತಮ್ಮ ಸ್ವಂತ ಹಣದಿಂದಲೇ ಖರೀದಿಸಿದ ತೆಂಗು, ಕರಿಬೇವು, ಲಿಂಬೆ ನುಗ್ಗೆ ಸೇರಿದಂತೆ ವಿವಿಧ ಬಗೆಯ ಸಸಿಗಳನ್ನು ನೆಡಲಾಯಿತು.

ತಾಲೂಕು ಕ್ಷೇತ್ರ ಸಮನ್ವಯಾಧಿಕಾರಿ ಚಂದ್ರಶೇಖರ ಭಗವಂತಗೌಡರ, ತಾಲೂಕ ದೈಹಿಕ ಶಿಕ್ಷಣ ನಿರ್ದೇಶಕ ಎನ್.ಐ ಇಚ್ಚಂಗಿ, ಶಾಲೆಯ ಸಿಬ್ಬಂದಿ ವರ್ಗ, ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು ಗ್ರಾಮಸ್ಥರು ಮತ್ತಿತರರು ಭಾಗವಹಿಸಿದ್ದರು.

## ಸಹಾಯಧನದಿಂದ ವಂಚಿತರಾಗದಂತೆ ಬೆಳೆಹಾನಿ ಸಮೀಕ್ಷೆ ನಡೆಸಿ : ರಮೇಶ ಜಾರಕಿಹೊಳಿ

ಬೆಳಗಾವಿ: ಲಾಕ್‌ಡೌನ್‌ನಂದ ಸಂಕಷ್ಟದಲ್ಲಿರುವ ತರಕಾರಿ, ಹೂ ಬೆಳೆಗಾರರು ಸರ್ಕಾರದ ಸಹಾಯಧನದಿಂದ ವಂಚಿತರಾಗದಂತೆ ಹಾಗೂ ಸಮರ್ಪಕವಾಗಿ ಬೆಳೆಹಾನಿ ಸಮೀಕ್ಷೆ ನಡೆಸುವಂತೆ ಜಿಲ್ಲಾಡಳಿತ ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ರಮೇಶ ಜಾರಕಿಹೊಳಿ ತಾಕೀತು ಮಾಡಿದ್ದಾರೆ.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಪ್ರವಾಹ ನಿರ್ವಹಣೆ ಕುರಿತು ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ಸರ್ಕಾರಿ ಸೌಲಭ್ಯಗಳಿಂದ ಬೆಳೆಗಾರರು ವಂಚಿತರಾಗದಂತೆ ಇಲಾಖೆ ಅಧಿಕಾರಿಗಳು ಎಚ್ಚರ ವಹಿಸಬೇಕು ಎಂದರು. ತೋಟಗಾರಿಕೆ ಇಲಾಖೆ ಅಧಿಕಾರಿಗಳು ತಪ್ಪು ಮಾಹಿತಿ ನೀಡಬಾರದು. ರೈತರಿಗೆ ಸಿಗಬೇಕಿರುವ ಪರಿಹಾರ ಮತ್ತು ಬೆಳೆವಿಮೆ ಸಮರ್ಪಕವಾಗಿ ಒದಗಿಸಬೇಕು. ರೈತರಿಗೆ ಕಳಪೆ ಬಿತ್ತನೆ ಬೀಜ ನೀಡಿರುವ ಕಂಪನಿಗಳ ವಿರುದ್ಧ ಕ್ರಮ ಜರುಗಿಸಬೇಕು ಎಂದರು.

ಅಧಿಕಾರಿಗಳ ನಿರ್ಲಕ್ಷ್ಯ: ವಿಧಾನ ಪರಿಷತ್ ಆಡಳಿತ ಪಕ್ಷದ ಮುಖ್ಯ ಸಚೇತಕ ಮಹಾಂತೇಶ ಕವಟಗಿಮಠ ಮಾತನಾಡಿ, ತರಕಾರಿ ಮತ್ತು ಹೂ ಬೆಳೆಗಾರರ ಸಮೀಕ್ಷೆ ನಡೆಸಿ ವರದಿ ಸಲ್ಲಿಸುವಂತೆ ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿತ್ತು. ಆದರೆ, ಸಮೀಕ್ಷೆ ನಡೆಸದ ಅಧಿಕಾರಿಗಳು ಇದೀಗ ಸಮೀಕ್ಷೆಗಾಗಿ ಸರ್ಕಾರದ ಆದೇಶಕ್ಕಾಗಿ ಕಾಯುತ್ತಿದ್ದೇವೆ ಎಂದು ನಿರ್ಲಕ್ಷ್ಯ ತೋರುತ್ತಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈಲ್ವೆ ಖಾತೆ ರಾಜ್ಯ ಸಚಿವ ಸುರೇಶ ಅಂಗಡಿ, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಸಂಸದ ಅಣ್ಣಾಸಾಹೇಬ ಜೊಲ್ಲೆ, ಜಿಪಂ ಅಧ್ಯಕ್ಷೆ ಆಶಾ ಐಹೊಳೆ, ಉಪಾಧ್ಯಕ್ಷ ಅರುಣ ಕಟಾಂಬಳೆ, ಜಿಪಂ ಸಿಇಒ ಡಾ. ಕೆ.ವಿ. ರಾಜೇಂದ್ರ, ಇಲಾಖೆ ಅಧಿಕಾರಿಗಳಿದ್ದರು.

## ಭಾರತೀಯ ರೆಡ್ ಕ್ರಾಸ್ ಸಂಸ್ಥೆ ವತಿಯಿಂದ ಮಾಸ್ಕ್ ಹಾಗೂ ಸ್ಯಾನಟೈಸರ್ ವಿತರಣೆ

ಹಾಸನ,ಜು.09:– ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಹಾಸನ ಶಾಖೆಯು ವತಿಯಿಂದ ಕೊರೋನಾ ಸಂದರ್ಭದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೋಲಿಸ್ ಇಲಾಖೆಯ ಸಿಬ್ಬಂದಿಗಳ ಉಪಯೋಗಕ್ಕಾಗಿ 1000 ಮಾಸ್ಕ್‌ಗಳು, 1000 ಸ್ಯಾನಟೈಸರ್ ಹಾಗೂ 1800 ಬಾಟಲ್ ತಂಪು ಪಾನೀಯಗಳನ್ನು, ಹಾಸನ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ರೆಡ್ ಕ್ರಾಸ್ ಅಧ್ಯಕ್ಷರು ಆದ ಆರ್.ಗಿರೀಶ್ ರವರಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀನಿವಾಸ್‌ಗೌಡ ರವರಿಗೆ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಜುಲೈ 8 ರಂದು ನೀಡಲಾಯಿತು.

ಈ ಸಂದರ್ಭದಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿಗಳಾದ ಹೆಮ್ಮಿಗೆ ಮೋಹನ್, ಕಾರ್ಯದರ್ಶಿ ಅನುಗನಾಳು ಕೃಷ್ಣಮೂರ್ತಿ, ನಿರ್ದೇಶಕರಾದ ಜಯೇಂದ್ರ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ॥ ಸತೀಶ್ ಕುಮಾರ್ ಹಾಗೂ ತಾಹಸಿಲ್ದಾರ್ ಶಿವಶಂಕರಪ್ಪನವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು..

# ನಗರದ ಹೊರವಲಯದ ನಿವಾಸಿಗಳಿಗೆ ಶಾಶ್ವತ ಕುಡಿಯುವ ನೀರು ಸಂಪರ್ಕ ಒದಗಿಸಲು ಕ್ರಮ : ಕೆ.ಎಸ್.ಈಶ್ವರಪ್ಪ

ಶಿವಮೊಗ್ಗ, ಜುಲೈ 08 ಶಿವಮೊಗ್ಗ ನಗರದ ಹೊರವಲಯದಲ್ಲಿನ ನಿವಾಸಿಗಳಿಗೆ ಇರುವ ಕುಡಿಯುವ ನೀರಿನ ಸಮಸ್ಯೆಯನ್ನು ಇತ್ಯರ್ಥಪಡಿಸಿ, ಶಾಶ್ವತ ಕುಡಿಯುವ ನೀರನ್ನು ಒದಗಿಸಲು ಪಾಲಿಕೆ ವತಿಯಿಂದ 9ಕೋಟಿ ರೂ. ವೆಚ್ಚದ ಕ್ರಿಯಾ ಯೋಜನೆಯನ್ನು ರೂಪಿಸಿ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಶೀಘ್ರದಲ್ಲಿ ಮಂಜೂರಾತಿ ಪಡೆದು ಕಾರ್ಯಾರಂಭ ಮಾಡಲಾಗುವುದೆಂದು ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್.ಈಶ್ವರಪ್ಪ ಅವರು ಹೇಳಿದರು. ಅವರು ಇಂದು ಶಿವಮೊಗ್ಗ ನಗರದ ಕುಡಿಯುವ ನೀರು ಸರಬರಾಜು ಮತ್ತು ಯು.ಜಿ.ಡಿ. ಕಾಮಗಾರಿಗಳ ಕುರಿತು ಮಹಾನಗರಪಾಲಿಕೆಯ ಪರಿಷತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಪಾಲಿಕೆ ಅಧಿಕಾರಿ–ಸಿಬ್ಬಂಧಿಗಳು ನಗರದ ಎಲ್ಲಾ ವಾರ್ಡುಗಳಿಗೆ ಭೇಟಿ ನೀಡಿ, ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಇರುವ ನ್ಯೂನತೆಗಳನ್ನು ಗಮನಿಸಿ, ಬಹುತೇಕ ಸಮಸ್ಯೆಗಳನ್ನು ಇತ್ಯರ್ಥಪಡಿಸಿದ್ದು, ಉಳಿದಂತೆ 09ವಾರ್ಡುಗಳಲ್ಲಿ ಗುರುತಿಸಲಾಗಿರುವ ಸಮಸ್ಯೆಗಳನ್ನು ಮುಂದಿನ ಎರಡು ತಿಂಗಳೊಳಗಾಗಿ ಪೂರ್ಣಗೊಳಿಸಿ, ಕುಡಿಯುವ ನೀರನ್ನು ಒದಗಿಸಲಾಗುವುದು ಎಂದವರು ನುಡಿದರು.

ಪಾಲಿಕೆ ವ್ಯಾಪ್ತಿಯ ಎಲ್ಲಾ ವಾರ್ಡುಗಳಿಗೆ ಯಾವುದೇ ಅಡತಡೆ ಇಲ್ಲದೆ ಕುಡಿಯುವ ನೀರನ್ನು ಒದಗಿಸುವಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಗಳ ವರ್ತನೆಯನ್ನು ಸಹಿಸಿಕೊಳ್ಳಲಾಗುವುದಿಲ್ಲ ಎಂದು ಎಚ್ಚರಿಸಿದ ಅವರು, ಪಾಲಿಕೆಯ ವಾರ್ಡುಗಳಲ್ಲಿ ನೀರು ಸರಬರಾಜಿನಲ್ಲಿ ಉಂಟಾಗಿರುವ ಸಮಸ್ಯೆಗಳನ್ನು ಗಮನಿಸಿ ಇತ್ಯರ್ಥಗೊಳಿಸಬೇಕು. ಕೈಗೊಳ್ಳುವ ಕಾಮಗಾರಿಗಳಿಗೆ ಅಗತ್ಯ ಅನುದಾನವನ್ನು ಸಕಾಲದಲ್ಲಿ ಮಂಜೂರು ಮಾಡುವಂತೆ ಪಾಲಿಕೆ ಆಯುಕ್ತರಿಗೆ ಸೂಚಿಸಲಾಗಿದೆ ಎಂದವರು ನುಡಿದರು.

ಪ್ರಸಕ್ತ ಸಾಲಿನ 24*7 ಕುಡಿಯುವ ನೀರಿನ ಯೋಜನೆ ಅನುಷ್ಠಾನಕ್ಕೆ ನಿಗಧಿಪಡಿಸಲಾಗಿದ್ದ ದಿನಾಂಕವನ್ನು ಮುಂದಿನ ಸಾಲಿನ ಜೂನ್ ಮಾಹೆಯವರೆಗೆ ವಿಸ್ತರಿಸುವಂತೆ ಗುತ್ತಿಗೆದಾರರು ಪಾಲಿಕೆಗೆ ವಿನಂತಿಸಿದ್ದಾರೆ. ಈ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮ ವಹಿಸಲಾಗುವುದು ಎಂದ ಅವರು, ನಗರದಲ್ಲಿನ ಅನಧಿಕೃತ ನಲ್ಲಿಗಳನ್ನು ಸಕ್ರಮಗೊಳಿಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮದ ಕರಾರುವಕ್ಕಾದ ಅನುಷ್ಠಾನಕ್ಕಾಗಿ ಪಾಲಿಕೆ ಸಿಬ್ಬಂಧಿ ಮತ್ತು ಅಧಿಕಾರಿಗಳನ್ನು ನಿಯೋಜಿಸಲಾಗುವುದು. ಈಗಾಗಲೇ ಪಾಲಿಕೆಯ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ಆಧಾರ್ ಕಾರ್ಡು ಮತ್ತು ವಿದ್ಯುತ್ ಬಿಲ್‌ನ ಝೆರಾಕ್ಸ್‌ನಂತಹ ಸುಲಭ ಹಾಗೂ ಸರಳವಾದ ದಾಖಲೆಗಳನ್ನು ಒದಗಿಸಿ, ನಿಗಧಿಪಡಿಸಲಾದ 2,800/–ರೂ.ಗಳ ಶುಲ್ಕ ಪಾವತಿಸಿ, ನಲ್ಲಿಯನ್ನು ಸಕ್ರಮಗೊಳಿಸಿಕೊಳ್ಳಲು ಅವಕಾಶ ನೀಡಲಾಗುವುದು. ಇದರಿಂದಾಗಿ ಅಕ್ರಮ ನಲ್ಲಿಗಳು ಸಕ್ರಮಗೊಳ್ಳಲಿವೆ ಅಲ್ಲದೆ ಪಾಲಿಕೆಗೆ ಆದಾಯ ಬರಲಿದೆ ಎಂದರು.ಮುಂದಿನ ಆಗಸ್ಟ್ 15ರೊಳಗಾಗಿ ಯು.ಜಿ.ಡಿ. ಸಂಪರ್ಕಗೊಳಿಸಿಕೊಳ್ಳದಿರುವ ಮನೆಗಳ ನಲ್ಲಿ ಸಂಪರ್ಕವನ್ನು ರದ್ದುಪಡಿಸಲು ಇಂದಿನ ಸಭೆಯಲ್ಲಿ ಕೈಗೊಳ್ಳಲಾಗಿದೆ. ಇದಕ್ಕೆ ಅವಕಾಶವಿಲ್ಲದಂತೆ ನಗರವಾಸಿಗಳು ಪಾಲಿಕೆಯೊಂದಿಗೆ ಕೈಜೋಡಿಸುವಂತೆ ಅವರು ಮನವಿ ಮಾಡಿದರು.

ಸಭೆಯಲ್ಲಿ ಉಪಸ್ಥಿತರಿದ್ದ ರಮೇಶ್ ಹೆಗ್ಡೆ ಅವರು ಮಾತನಾಡಿ, ನಗರ ನೀರು ಸರಬರಾಜಿನಲ್ಲಿ ಹಿಂದಿಗಿಂತ ಸಾಕಷ್ಟು ಸುಧಾರಣೆಗಳಾಗಿವೆ. ಅಲ್ಲಲ್ಲಿ ಟ್ಯಾಂಕುಗಳ ಲೀಕೇಜ್ ಕಂಡುಬರುತ್ತಿದೆ. ಅವುಗಳನ್ನು ದುರಸ್ತಿಗೊಳಿಸಿದಲ್ಲಿ ನೀರು ಸರಬರಾಜಿನಲ್ಲಿ ಇನ್ನಷ್ಟು ಸುಧಾರಣೆ ಕಂಡುಬರಲಿದೆ ಎಂದರು. ಸಭೆಯಲ್ಲಿ ಮಹಾನಗರಪಾಲಿಕೆ ಮೇಯರ್ ಶ್ರೀಮತಿ ಸುವರ್ಣ ಶಂಕರ್, ಉಪಮೇಯರ್ ಶ್ರೀಮತಿ ಸುರೇಖಾ ಮುರಳೀಧರ್, ಆಯುಕ್ತ ಚಿದಾನಂದ ಎಸ್.ವಟಾರೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.